ಇ) ಉದ್ಭವಿಸುವುದಿಲ್ಲ.

ವಿಷಯ: ದ.ಕ. ಹಾಗೂ ಉಡುಪಿ ಜಿಲ್ಲೆಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ.

10 12 (150 1)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಿಗೆ ಮಂಜೂರಾದ ವೈದ್ಯರುಗಳು ಮತ್ತು ವೈದ್ಯೇತರರುಗಳ ಸಂಖ್ಯೆ ಎಷ್ಟು?

ಆ) ಇಷ್ಟು ಖಾಲಿ ಹುದ್ದೆ ಇರುವುದರಿಂದ ದೈನಂದಿನ ಕೆಲಸಗಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

ಇ) ಬಂದಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) **ದಕ್ಷಿಣ ಕನ್ನಡ ಜಿಲ್ಲೆ**

1. ವೈದ್ಯರುಗಳು	:	114
2. ವೈದ್ಯೇತರರು	:	1451

ಉಡುಪಿ ಜಿಲ್ಲೆ

1. ವೈದ್ಯರು	:	107
2. ವೈದ್ಯೇತರರು	:	879

ಆ) ಬಂದಿದೆ.

ಇ) ಗ್ರಾಮಾಂತರ ಪ್ರದೇಶದಲ್ಲಿ ವೈದ್ಯರುಗಳ ಕೊರತೆ ನಿವಾರಿಸಲು ಹತ್ತಿರವಿರುವ ಪ್ರಾಥಮಿಕ ಆರೋಗ್ಯ ಕೇಂದ್ರ : ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳನ್ನು ಪ್ರಭಾರದ ಮೇಲೆ ನೇಮಕ ಮಾಡುವ ಮೂಲಕ ದೈನಂದಿನ ಕೆಲಸಗಳಿಗೆ

ಮತ್ತು ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಲಾಗಿದೆ.

ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಳ್ಳಲಾಗುತ್ತಿದೆ.

ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಗೆ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ನೇಮಕಾತಿಗಾಗಿ ಕಾಯುತ್ತಿರುವ ವೈದ್ಯರನ್ನು ನೇಮಿಸುವ ಮೂಲಕ ಹಾಗೂ 1998ನೇ ಸಾಲಿನ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ವೈದ್ಯೇತರ ಹುದ್ದೆಗಳಲ್ಲಿ ಸ್ಟಾಫ್‌ನರ್ಸ್‌ಗಳ ಹುದ್ದೆಗಳನ್ನು ತುಂಬಲು ಸಂದರ್ಶನ ನಡೆಸಲಾಗಿದೆ. ಹಾಗೂ ಇತರೇ ವೈದ್ಯೇತರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಹಾಗೂ 1998ನೇ ಸಾಲಿನ ಸಾಮಾನ್ಯ ವರ್ಗಾವಣೆಯ ಸಮಯದಲ್ಲಿ ವರ್ಗಾವಣೆ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ: ರಾಜ್ಯದಲ್ಲಿ ಟಿ.ಸಿ.ಹೆಚ್ ಹಾಗೂ ಬಿ.ಎಡ್ ಆದ ಉಪಾಧ್ಯಾಯರುಗಳ ಆಯ್ಕೆ.

1013 (1502)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) 1996-97, 1997-98ನೇ ಸಾಲಿನಲ್ಲಿ ಎಷ್ಟು ಜನ ಟಿ.ಸಿ.ಹೆಚ್ ಮತ್ತು ಬಿ.ಎಡ್ ತರಬೇತಿ ಪಡೆದವರಿಗೆ ಅಧ್ಯಾಪಕರ ಹುದ್ದೆಯನ್ನು ನೀಡಲಾಗಿದೆ?

ಆ) ಈ ಆಯ್ಕೆಯನ್ನು ಯಾವ ಆಧಾರದ ಮೇಲೆ ಮಾಡಲಾಗಿದೆ (ವಿವರ ನೀಡುವುದು)

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):

ಅ) 1996-97ನೇ ಸಾಲಿನಲ್ಲಿ ಟಿ.ಸಿ.ಹೆಚ್ ತರಬೇತಿ ಪಡೆದ 17,997 ಶಿಕ್ಷಕರನ್ನು ಪ್ರಾಥಮಿಕ ಶಾಲೆಗಳಿಗೆ ಹಾಗೂ ಬಿ.ಇಡಿ ತರಬೇತಿ ಪಡೆದ 2445 ಶಿಕ್ಷಕರನ್ನು ಪ್ರೌಢ ಶಾಲೆಗಳಿಗೆ ಆಯ್ಕೆ ಮಾಡಲಾಗಿದೆ. 1997-98ನೇ ಸಾಲಿನ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯು ಮುಂದುವರಿದಿದೆ.

ಆ) ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿದ ಅರ್ಹತೆ ಹೊಂದಿದ ಅಭ್ಯರ್ಥಿಗಳು ನಿಗದಿತ ಪರೀಕ್ಷೆಗಳಲ್ಲಿ ಗಳಿಸಿದ ಶೇಕಡವಾರು ಅಂಕಗಳ ಆಧಾರದ ಮೇಲೆ ಹಾಗೂ